ಮೈಸೂರು ತಾಲ್ಲೂಕಿನಲ್ಲಿ ಅನಧೀಕೃತ ಗಣಿಗಾರಿಕೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 381(644)

ಸದಸ್ಯರ ಹೆಸರು : ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ)

ಉತ್ತರಿಸುವ ಸಚಿವರು : ಶ್ರೀ ವಿ.ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಹಾಗೂ ಅಂತರ್ಜಲ ಸಚಿವರು)

ಪ್ರಶ್ನೆ

ಅ. ಮೈಸೂರು ತಾಲ್ಲೂಕಿನಲ್ಲಿ ಇರುವ ಗಣಿಗಳ ಸಂಖ್ಯೆ ಎಷ್ಟು? ಇದರಲ್ಲಿ ಎಷ್ಟು ನೋಂದಾಯಿತವಾಗಿದೆ? ಇದರಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು?

ಆ. ಮೈಸೂರು ತಾಲ್ಲೂಕು ವ್ಯಾಪ್ತಿಯಲ್ಲಿ ಅನಧಿಕೃತ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಇದರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ?

ಇ. ಮೈಸೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಹೆಚ್ಚಿಸಲು ಕೈಗೊಂಡಿರುವ ಕ್ರಮಗಳೇನು?

ಉತ್ತರ

ಅ. ಮೈಸೂರು ತಾಲ್ಲೂಕಿನಲ್ಲಿ ಒಟ್ಟು 6 ಗಣಿ ಗುತ್ತಿಗೆಗಳು ಹಾಗೂ 16 ಕಲ್ಲು ಗಣಿ ಗುತ್ತಿಗೆಗಳು ನೋಂದಣಿಯಾಗಿರುತ್ತದೆ. ಇದರಿಂದ ಸರ್ಕಾರಕ್ಕೆ ಒಟ್ಟು 62,88,053.00 ರೂ.ಗಳು ಆದಾಯ ಬಂದಿರುತ್ತವೆ.

ಆ. ಮೈಸೂರು ತಾಲ್ಲೂಕಿನಲ್ಲಿ ಇಲ್ಲಿಯವರೆವಿಗೆ 17 ಸ್ಥಳಗಳಲ್ಲಿ ಅನಧಿಕೃತ ಕಲ್ಲು ಗಣಿಗಾರಿಕೆಯನ್ನು ಪತ್ತೆ ಹಚ್ಚಲಾಗಿದೆ. 8 ಪ್ರಕರಣಗಳಲ್ಲಿ ಕಲ್ಲು ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಿಕೊಡಲಾಗಿದೆ. 6 ಪ್ರಕರಣಗಳಲ್ಲಿ ದಂಡ ವಿಧಿಸಿ ಕಲ್ಲು ಗಣಿಗಾರಿಕೆಯನ್ನು ನಿಲ್ಲಿಸಲಾಗಿದೆ. ಎರಡು ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಕಟ್ಟೆ ದಾಖಲು ಮಾಡಲಾಗಿದೆ. ಇದಲ್ಲದೆ ಅನಧಿಕೃತವಾಗಿ ಖನಿಜ ಸಾಗಾಣಿಕೆ ಮಾಡುತ್ತಿರುವುದರಿಂದ ರೂ.79,500.00ಗಳ ದಂಡ ವಸೂಲಿ ಮಾಡಲಾಗಿದೆ.

ಇ. ಪ್ರಸ್ತುತ ಮೈಸೂರು ತಾಲ್ಲೂಕಿನಲ್ಲಿ ಲಭ್ಯವಿರುವ ಅಂತರ್ಜಲವನ್ನು ಕಡಿಮೆ ಪ್ರಮಾಣದಲ್ಲಿ ಬಳಕೆ ಮಾಡಿರುವುದರಿಂದ ಆ ತಾಲ್ಲೂಕನ್ನು ಬಿಳಿ ಪ್ರದೇಶವೆಂದು ನಬಾರ್ಡ್ ಸಂಸ್ಥೆಯವರು ವರ್ಗೀಕರಣ ಮಾಡಿರುತ್ತಾರೆ. ಆದ್ದರಿಂದ, ಇಲಾಖೆಯು

ಪ್ರಸ್ತುತವಾಗಿ ಅಂತರ್ಜಲ ಮರುಪೂರ್ಯೆಕೆ ರಚನೆಗಳ ನಿರ್ಮಾಣ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.

ಜವಳಿ ಕೈಗಾರಿಕೆ ನಿಯಮ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 382(645)

ಸದಸ್ಯರ ಹೆಸರು : ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ)

ಉತ್ತರಿಸುವ ಸಚಿವರು : ಶ್ರೀ ಎಂ.ಮಹದೇವ್(ರೇಷ್ಮೆ ಮತ್ತು ಜವಳಿ ಸಚಿವರು)

ಪ್ರಶ್ನೆ

ಅ) ಜವಳಿ ಕನ್‌ಕರೆಂಟ್ ಲಿಸ್ಟ್‌ನಲ್ಲಿದ್ದರೂ ಸಹ ರಾಜ್ಯಗಳ ಗಮನಕ್ಕೆ ತರದೇ ಬೆಲೆ ಆಮದು ಮತ್ತು ರಫ್ತು ಮಾರುಕಟ್ಟೆ ನೀತಿಯನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ಅನೇಕ ನಿರ್ಬಂಧ ಹೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮ ಏನು?

ಉತ್ತರ

ಅ) ಜವಳಿ ಕನ್‌ಕರೆಂಟ್ ಲಿಸ್ಟ್‌ನಲ್ಲಿದ್ದರೂ ಸಹ ಕೈಗಾರಿಕಾ ಅಭಿವೃದ್ಧಿ ಹಾಗೂ ನಿಯಂತ್ರಣ ಕಾಯ್ದೆಯನ್ವಯ ಜವಳಿ ಕೈಗಾರಿಕೆಗೆ ಸಂಬಂಧಿಸಿದಂತೆ ನೀತಿ ರೂಪಿಸುವ ಅಧಿಕಾರವು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ. ಆದ್ದರಿಂದ, ಆಮದು ಮತ್ತು ರಫ್ತು ಕುರಿತು ನಿಯಮ ರೂಪಿಸುವುದು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ.

ಜವಳಿ ಉದ್ದಿಮೆ ಬೆಳವಣಿಗೆಗೆ ಕ್ರಮ ಕೈಗೊಳ್ಳುವ ಅಧಿಕಾರ ಮಾತ್ರ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿದೆ. ಕೇಂದ್ರ ಸರ್ಕಾರದ ಜವಳಿ ನೀತಿ 2000-ರಂತೆ ಎಲ್ಲಾ ನಿರ್ಬಂಧಗಳನ್ನು ತೆಗೆದು ಹಾಕಲಾಗಿದೆ.

ಆ) ಉದ್ಭವಿಸುವುದಿಲ್ಲ.

ಮೈಸೂರು ತಾಲ್ಲೂಕಿನ ಕೈಗಾರಿಕಾ ವಿವರ.